**CC 5125/2023**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್** 5125/2023

**ಸಿ ಡಬ್ಲ್ಯೂ** -16

**ಪಿ ಡಬ್ಲ್ಯೂ** -9

**ಸಾಕ್ಷಿಯ ಹೆಸರು -** **ಸುನೀಲ ಜಲೋತ್ರ**
**ತಂದೆಯ ಹೆಸರು -** **ಒಂಪ್ರಕಾಶ್ ಜಲೋತ್ರ**
**ವಯಸ್ಸು -** 49 **ವರ್ಷಗಳು**
**ಉದ್ಯೋಗ -** **ವ್ಯಾಪಾರ**
**ವಾಸಸ್ಥಳ -** **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ** 05-12-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ನಾನು ಹಂಪಿಯಲ್ಲಿ ಸ್ಪಟಿಕದ ಕಲ್ಲು ಮಾರಾಟ ಮಾಡುತ್ತೇನೆ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ಹೇಳಿದ್ದರಿಂದ ಒಂದು ದಾಖಲೆಗೆ ಸಹಿ ಮಾಡಿದ್ದೆ. ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನಾನು ನೋಡಿರುವುದಿಲ್ಲ.

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **2** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **2(ಜಿ)** ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಈಗ್ಗೆ **2** ವರ್ಷಗಳ ಹಿಂದೆ ಪೋಲಿಸ್ ಠಾಣೆಯಲ್ಲಿ ಮಾಡಿರುತ್ತೇನೆ. ನಿಪಿಃ **2** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ. ಮುದ್ದೆ ಮಾಲನ್ನು ನೋಡಿದರೆ

ಗುರುತಿಸಲು ಆಗುವುದಿಲ್ಲ . ಆರೋಪಿರತನ್ನು ನಾನು ನೋಡಿಲ್ಲ ಮತ್ತು ಗುರುತಿಸಲು ಆಗುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 24-06-2023 ರಂದು ನನ್ನನ್ನು ಪೋಲಿಸರು ಠಾಣೆಗೆ ಕರೆಯಿಸಿ ಪ್ರಕರಣದಲ್ಲಿನ ದಾಳಿ ಕಾರ್ಯದ ಬಗ್ಗೆ ಮಾಹಿತಿ ನೀಡಿದ್ದರು ಅಂದರೆ ಸರಿಯಲ್ಲ. ನನ್ನನ್ನು ಮತ್ತು ಪಂಚರನ್ನು ಇಲಾಖಾ ಜೀಪಿನಲ್ಲಿ ಕಡ್ಡಿರಾಂಪುರದ ಉದ್ದಾನಪ್ಪನವರ ಜಮೀನಿನ ಬಳಿ ಕರೆದುಕೊಂಡು ಹೋಗಿದ್ದರು ಅಂದರೆ ಸರಿಯಲ್ಲ. ಅಲ್ಲಿ ನ್ಯಾಯಾಲಯದ ಮುಂದೆ ಇರುವ ಆರೋಪಿತರು ಸಿಕ್ಕರು ಅಂದರೆ ಸರಿಯಲ್ಲ. ಸದರಿಯವರ ಅಂಗಶೋಧನೆ ಮಾಡಿದಾಗ ಪ್ಲಾಸ್ಟಿಕ್ ಚೀಲಗಳಲ್ಲಿ ಗಾಂಜಾ ದೊರಕಿತು ಅಂದರೆ ಸರಿಯಲ್ಲ. ಸದರಿ ಚೀಲಗಳನ್ನು ತೂಕ ಮಾಡಿ ನೋಡಿದಾಗ ಚೀಲ ಸಮೇತ 220 ಗ್ರಾಂ ಮತ್ತು ಚೀಲ ತೆಗೆದು 200 ಗ್ರಾಂ ಗಾಂಜಾ ಇದ್ದದ್ದು ಕಂಡು ಬಂದಿತು ಅಂದರೆ ಸರಿಯಲ್ಲ. ಆಗಲೇ ನಿಪಿಃ 2 ನ್ನು ಬರೆಯಲಾಗಿತ್ತು ಅಂದರೆ ಸರಿಯಲ್ಲ. ನಿಪಿಃ 2 ಕ್ಕೆ ಪಂಚನಾಮೆ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಅಂದರೆ ಸರಿಯಲ್ಲ.

ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ಮತ್ತು ಆರೋಪಿತರನ್ನು ಈ ಮೊದಲು ನೋಡಿರುತ್ತೇನೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಆಗಿದ್ದರೂ, ಆರೋಪಿತರು ಮತ್ತು ಮುದ್ದೆ ಮಾಲನ್ನು

ನೋಡಿದರೆ ಹುರುತಿಸಲು ಸಾಧ್ಯವಿದ್ದರೂ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಟಿ.ಎಲ್.ಎಸ್.ಕೆ ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.